ಭಟ್ಕಳ ತಾಲ್ಲೂಕಿನಲ್ಲಿ 20 ಮಜರೆಗಳನ್ನು ವಿದ್ಯುದ್ದೀಕರಿಸಲು ಸುಮಾರು 19 ಲಕ್ಷ ರೂ. ಗಳನ್ನು ಗ್ರಾಮೀಣ ವಿದ್ಯುದ್ದೀಕರಣ ನಿಗಮದ ಮಂಜೂರಾತಿಯನ್ನು ನಿರೀಕ್ಷಿಸಿ ಈಗಾಗಲೇ ಖರ್ಚು ಮಾಡಲಾಗಿದೆ.

ಆ) ಸಿಬ್ಬಂದಿ ಕೊರತೆಯಿದ್ದರೂ ಸಹ ಅಂದಾಜು ಪಟ್ಟಿಗಳನ್ನು ತಯಾರಿಸುವ ಕಾರ್ಯವನ್ನು ಸ್ಥಗಿತಗೊಳಿಸಿಲ್ಲ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಬಂದರು ಕಾಮಗಾರಿ

220 - ಡಾ|| ಯು. ಚಿತ್ತರಂಜನ್ (ಭಟ್ಕಳ) : ಮಾನ್ಯ ಬಂದರು ಮತ್ತು ಮೀನುಗಾರಿಕೆ ರಾಜ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಉತ್ತರ ಕನ್ನಡ ಜಿಲ್ಲೆಯ ವಿವಿಧ ಬಂದರುಗಳಲ್ಲಿ 1995-96 ರಲ್ಲಿ ನಡೆದ ಕಾಮಗಾರಿಗಳು ಯಾವುವು? ಈ ಬಗ್ಗೆ ಎಷ್ಟು ಹಣ ವಿರ್ಚಾಗಿದೆ?

ಆ) ಭಟ್ಕಳ ಬಂದರಿನ ಹೊಳೆತ್ತುವ ಕೆಲಸ ಮಂಜೂರಾಗಿ 1 1/2 ವರ್ಷಗಳಾದರೂ ಇನ್ನೂ ಕೂಡ ಕೆಲಸ ಪ್ರಾರಂಭವಾಗದಿರಲು ಕಾರಣಗಳೇನು; ಹಾಗೂ ಯಾವಾಗ ಕೆಲಸ ಪ್ರಾರಂಭವಾಗಲಿದೆ?

ಶ್ರೀ ಕೆ. ಜಯಪ್ರಕಾಶ್ ಹೆಗಡೆ (ಬಂದರು ಮತ್ತು ಮೀನುಗಾರಿಕೆ ರಾಜ್ಯ ಮಂತ್ರಿಗಳು) :

ಅ) ಉತ್ತರ ಕನ್ನಡ ಜಿಲ್ಲೆಯ ಕಾರವಾರ ಬಂದರಿನಲ್ಲಿ ಅಲೆತಡೆ ಗೋಡೆ ನಿರ್ಮಾಣ, ಆಡಳಿತ ಕಛೇರಿ ನಿರ್ಮಾಣ ಹಾಗೂ ಕಾರವಾರ ಬೀಲಿಕೇರಿ, ತದಡಿ ಹೊನ್ನಾವರ ಮತ್ತು ಭಟ್ಕಳ ಬಂದರುಗಳ ನಿರ್ವಹಣೆ ಹಾಗೂ ಸಣ್ಣಪ್ರಮಾಣದ ಕಾಮಗಾರಿಗಳನ್ನು ನೆರವೇರಿಸಲು ಯೋಜನೆ ಮತ್ತು ಯೋಜನೇತರ ಅಡಿಯಲ್ಲಿ 1995-96ನೇ ಸಾಲಿನಲ್ಲಿ ಇದುವರೆಗೆ ರೂ. 56.88 ಲಕ್ಷ ವೆಚ್ಚವಾಗಿರುತ್ತದೆ.

ಆ) ದಿನಾಂಕ: 28-12-95 ರಂದು ಗುತ್ತಿಗೆದಾರರಿಗೆ ಕಾರ್ಯದೇಶ ನೀಡಲಾಗಿದೆ.

ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದಲ್ಲಿ ಕುಡಿಯುವ ನೀರಿನ ವ್ಯವಸ್ಥೆ

153-ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರದ ಕುಸುಗಲ್ ಗ್ರಾಮದಲ್ಲಿ ಗ್ರಾಮದ ಕೆರೆಯ ನೀರನ್ನು ಹೊರತುಪಡಿಸಿ ಗ್ರಾಮಸ್ಥರಿಗೆ ಕುಡಿಯುವ ನೀರಿನ ಬೇರೆ ವ್ಯವಸ್ಥೆ ಇಲ್ಲದೆ ಇರುವುದರಿಂದ ಕೆರೆ ಬತ್ತಿಹೋದಲ್ಲಿ ಹಲಿ ಸದರಿ ಗ್ರಾಮಸ್ಥರು ನೀರಿಗಾಗಿ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಲ್ಲಿ ಸದರಿ ಗ್ರಾಮದ ಜನರಿಗೆ ಕುಡಿಯುವ ನೀರಿನ ಸಲುವಾಗಿ ಬದಲಿ ಪಾಯಂ ವ್ಯವಸ್ಥೆಯನ್ನು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):

ಅ) ಹುಬ್ಬಳ್ಳಿ ತಾಲ್ಲೂಕಿನ ಕುಸುಗಲ್ ಗ್ರಾಮಕ್ಕೆ ಈಗಾಗಲೇ ಕುಡಿಯುವ ನಲ್ಲಿ ನೀರು ಸರಬರಾಜು ಯೋಜನೆ. ಹಾಗೂ ಕಿರು ನೀರು ಸರಬರಾಜು ಯೋಜನೆಗಳು ಕಾರ್ಯ ರೂಪದಲ್ಲಿದ್ದು ಸದರಿ ಗ್ರಾಮಕ್ಕೆ ಈ ಯೋಜನೆಯಿಂದ ನೀರು ಪೂರೈಕೆ ಮಾಡಲಾಗುತ್ತಿದೆ. ಇದನ್ನು ಹೊರತುಪಡಿಸಿ, ನಾಲ್ಕು ಕೈಪಂಪು ಕೊಳವೆ ಬಾವಿಗಳು ಕೂಡಾ ಕಾರ್ಯನಿರ್ವಹಿಸುತ್ತಿದೆ. ಸದ್ಯ ಕೆರೆಯಲ್ಲಿ ಇನ್ನೂ ಸ್ವಲ್ಪ ನೀರು ಇದ್ದು ಗ್ರಾಮದ ಜನರು ಈ ನೀರನ್ನು ಹೊರಬಳಕೆಗಾಗಿ ಮಾತ್ರ ಉಪಯೋಗಿಸುತ್ತಿದ್ದಾರೆ. ಕಾರಣ ಸದ್ಯ ಕುಡಿಯುವ ನೀರಿನ ಯಾವುದೇ ಸಮಸ್ಯೆ ಇರುವುದು ಕಂಡುಬರುವುದಿಲ್ಲ.

ಆ) ಉದ್ಭವಿಸುವುದಿಲ್ಲ.